R11

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೈದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ:10ನೇ ಜುಲೈ, 2018
(ಸಮಯ: ಬೆಳಗ್ಗೆ 10.00 ಗಂಟೆಗೆ)

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

### 02. ಗಮನ ಸೆಳೆಯುವ ಸೂಚನೆಗಳು

ಅ) **ಡಾ. ತೇಜಸ್ವಿನಿ ಗೌಡ** ಅವರು ಕರ್ನಾಟಕ ರಾಜ್ಯದಲ್ಲಿ ಅಸಂಖ್ಯಾತ ಪ್ರಾಚೀನ, ಪುರಾತತ್ವ, ಪಾರಂಪರಿಕ ತಾಣ/ಸ್ಮಾರಕಗಳಿದ್ದು, ಸೂಕ್ತ ನಿರ್ವಹಣೆಯಿಲ್ಲದೆ ಶಿಥಿಲಾವಸ್ಥೆಯಲ್ಲಿರುವುದರಿಂದ ಅವುಗಳ ಸಂರಕ್ಷಣೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕೈಗೊಂಡಿರುವ ಕ್ರಮಗಳ ಬಗ್ಗೆ **ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಹಿರಿಯ ನಾಗರೀಕರು ಮತ್ತು ವಿಶಿಷ್ಟಚೇತನರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ** ಗಮನ ಸೆಳೆಯುವುದು.

ಆ) **ಶ್ರೀ ಬಸವರಾಜ ಪಾಟೀಲ್ ಇಟಗಿ** ಅವರು ರಾಯಚೂರು ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿನ ಸಿಬ್ಬಂದಿಗಳ ಕೊರತೆಯನ್ನು ನೀಗಿಸುವ ಬಗ್ಗೆ **ಮಾನ್ಯ ಬೃಹತ್ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ** ಸಚಿವರ ಗಮನ ಸೆಳೆಯುವುದು.

ಇ) **ಶ್ರೀ ಎನ್. ಅಪ್ಪಾಜಿಗೌಡ** ಅವರು ಮಂಡ್ಯ ಜಿಲ್ಲೆಯ ಹಾಲು ಉತ್ಪಾದಕರ ಒಕ್ಕೂಟದಲ್ಲಿ ನಡೆಯುತ್ತಿರುವ ವ್ಯಾಪಕ ಭ್ರಷ್ಟಾಚಾರದಿಂದಾಗಿ ಭಾರಿ ನಷ್ಟ ಅನುಭವಿಸುತ್ತಿರುವ ಬಗ್ಗೆ **ಮಾನ್ಯ ಸಹಕಾರ** ಸಚಿವರ ಗಮನ ಸೆಳೆಯುವುದು.

## 03. ನಿಯಮ 330ರ ಮೇರೆಗೆ

ಅ) **ಶ್ರೀ ಮರಿತಿಬ್ಬೇಗೌಡ** ಅವರು ಮೈಸೂರು ವಿಶ್ವವಿದ್ಯಾಲಯದಲ್ಲಿನ ಅರ್ಹ ಅಧ್ಯಾಪಕರಿಗೆ 2011ನೇ ಸಾಲಿನಿಂದ ಪ್ಲೇಸ್‌ಮೆಂಟ್ ಮತ್ತು ಸಿ.ಎ.ಎಸ್.. ಯೋಜನೆಯಡಿ ಬಡ್ತಿ ನೀಡದಿರುವುದರಿಂದ ಅಧ್ಯಾಪಕರಿಗೆ ಹಾಗೂ ಶೈಕ್ಷಣಿಕ ಪ್ರಗತಿಗೆ ಉಂಟಾಗಿರುವ ತೊಂದರೆಗಳ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಉನ್ನತ ಶಿಕ್ಷಣ ಸಚಿವರು)**

ಆ) **ಶ್ರೀ ಅ. ದೇವೇಗೌಡ** ಅವರು ಬೆಂಗಳೂರು ನಗರ ಚಿಕ್ಕಪೇಟೆ ಮುಖ್ಯರಸ್ತೆಯಲ್ಲಿರುವ ಸೈಟ್ ನಂ.202. 203 ಮತ್ತು 203/1ರ ಓಟಿಸಿ ರೋಡ್. ವಾರ್ಡ್ ಸಂಖ್ಯೆ:109ರಲ್ಲಿ ನಿಯಮಬಾಹಿರವಾಗಿ ವಾಣಿಜ್ಯ ಮಳಿಗೆಗಳನ್ನು ನಿರ್ಮಿಸಿದ್ದು. ಸದರಿ ಕಟ್ಟಡಗಳಿಗೆ ಬೆಸ್ಕಾಂ ಮತ್ತು ಬಿ.ಬಿ.ಎಂ.ಪಿ.ಯವರು ಕಾನೂನು ಬಾಹಿರವಾಗಿ ಸವಲತ್ತುಗಳನ್ನು ಒದಗಿಸಿರುವುದರಿಂದ ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿಗಳ ತೆರಿಗೆ ವಂಚನೆಯಾಗಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಉಪ ಮುಖ್ಯಮಂತ್ರಿಗಳು)**

## 04. ವಿತ್ತೀಯ ಕಾರ್ಯಕಲಾಪ

2018-2019ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ.

**(ಎರಡನೇ ದಿನ)**

## 05. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅಕ್ರಮ ಔಷಧಿಗಳ ಮಾರಾಟಕ್ಕೆ ಸಂಬಂಧಿಸಿದಂತೆ ದಿನಾಂಕ:09.07.2018ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:2(01)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀಮತಿ ತಾರಾಅನೂರಾಧ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ.**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
www.kla.kar.nic.in/council.htm